**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ. ಸಂಖ್ಯೆಃ 1300/2024**

**ಪಿರ್ಯಾದಿ :** ರಾಜ್ಯ, ಪರವಾಗಿ ಮೂಡಿಗೆರೆ ಪೊಲೀಸ್ ಠಾಣೆ,

ವಿರುದ್ಧ

**ಆರೋಪಿತರು:** 1. ಮೋಹಕ್ ಎಂ.ಅರ್., ವಯಸ್ಸು 26 ವರ್ಷ,
ಬಿನ್ ರುದ್ರೇಶ್ ಎಂ.ಇ.

2. ರುದ್ರೇಶ್, ವಯಸ್ಸು ಸುಮಾರು 65 ವರ್ಷ,
ಬಿನ್ ದಿಃ ಈರೇಗೌಡ.

ಇಬ್ಬರೂ ವಾಸ: ಕುಕ್ಕಳ್ಳಿಹರ, ದಾರದಹಳ್ಳಿ ಗ್ರಾಮ,
ಮೂಡಿಗೆರೆ ತಾಲ್ಲೂಕು.

**ದೋಷಾರೋಪಣೆ**

ಶ್ರೀ. ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿತರಾದ ನಿಮ್ಮಗಳ ಮೇಲೆ ಮಾಡುವ ದೋಷಾರೋಪಣೆಗಳು ಏನೆಂದರೆಃ-

ದಿನಾಂಕಃ 21.12.2023 ರಂದು ಬೆಳಗ್ಗೆ 11.00 ರ ಸಮಯದಲ್ಲಿ ಮೂಡಿಗೆರೆ ಪೊಲೀಸ್ ಠಾಣಾ ವ್ಯಾಪ್ತಿಯ ದಾರದಹಳ್ಳಿ ಗ್ರಾಮದ ಚಾಸಾ-4 ಅನ್ನಪೂರ್ಣ ಬಿ.ಆರ್. ರವರ ಬಾಬ್ತು ಸರ್ವೆ ನಂ.112 ರಲ್ಲಿ ಚಾಸಾ-1 ರವಿ ಎಂ.ಕೆ. ರವರು ಇದ್ದಾಗ ಆರೋಪಿತರುಗಳಾದ ನೀವುಗಳು ಸಮಾನ ಉದ್ದೇಶದಿಂದ ಚಾಸಾ-1 ರವರೊಂದಿಗೆ ಜಮೀನಿನ ವಿಚಾರವಾಗಿ ಹಳೇ ದ್ವೇಷದಿಂದ ಜಗಳ ತೆಗೆದು, ನಿಮ್ಮ ಪೈಕಿ 1 ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ದೊಣ್ಣೆಯಿಂದ ಎಡಕೈ ಹಸ್ತಕ್ಕೆ ಹಾಗೂ ಬಲ ಮೊಣಕಾಲಿಗೆ ಹೊಡೆದು ಸಾಧಾರಣ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿತರಾದ ನೀವು ಭಾರತ ದಂಡ ಸಂಹಿತೆ ಕಲಂ **324** ಸಹಕಲಂ **34** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**2**. ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿತರುಗಳಾದ ನೀವುಗಳು ಸಮಾನ ಉದ್ದೇಶದಿಂದ ಮುಂದುವರೆದು, ನಿಮ್ಮ ಪೈಕಿ 2 ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ಚಾಸಾ-2 ಬಾಸ್ಕರ ರವರ ಸಮಕ್ಷಮ ಸೂಳೆಮಗನೆ ಎಂದು ಅವಾಚ್ಯ ಶಬ್ದಗಳಿಂದ ಬೈದಿರುತ್ತೀರಿ. ಈ ರೀತ್ಯಾ ಆರೋಪಿತರಾದ ನೀವುಗಳು ಭಾರತ ದಂಡ ಸಂಹಿತೆ ಕಲಂ **504** ಸಹಕಲಂ **34** ರಡಿಯಲ್ಲಿ

ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**3.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿತರುಗಳಾದ ನೀವುಗಳು ಸಮಾನ ಉದ್ದೇಶದಿಂದ ಮುಂದುವರೆದು, ನಿಮ್ಮ ಪೈಕಿ 2 ನೇ ಆರೋಪಿಯು ಚಾಸಾ-1 ರವರಿಗೆ ಚಾಸಾ-2 ರವರ ಸಮಕ್ಷಮ ನಿನ್ನನ್ನು ಕಡಿಯದೇ ಬಿಡುವುದಿಲ್ಲ ಎಂದು ಕೊಲೆಬೆದರಿಕೆ ಹಾಕಿರುತ್ತೀರಿ. ಈ ರೀತ್ಯಾ ಆರೋಪಿತರಾದ ನೀವು ಭಾರತ ದಂಡ ಸಂಹಿತೆ ಕಲಂ **506** ಸಹವಾಚಕ ಕಲಂ **34** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ.

ಪ್ರಃ 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ? ಅವುಗಳು ನಿಮಗೆ ಅರ್ಥವಾಯಿತೇ?

1 ಮತ್ತು 2 ನೇ ಆರೋಪಿತರ ಉತ್ತರಃ

ಪ್ರಃ 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

1 ಮತ್ತು 2 ನೇ ಆರೋಪಿತರ ಉತ್ತರಃ

(ಆರೋಪಿತರಿಗೆ ದಿನಾಂಕ 12.11.2024 ರಂದು ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)

ಸಹಿ/-

ಮೂಡಿಗೆರೆ<br>
ದಿನಾಂಕಃ 12.11.2024

ಪ್ರಧಾನ ಸಿವಿಲ್ ನ್ಯಾಯಾಧೀಶರು<br>
ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.